# ಮತದಾರರಿಗೆ ಜಾಗೃತಿ ಕುರಿತು ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳಿಗೆ ಜಾಹೀರಾತು ನೀಡುವಂತೆ ಕೋರಿ ಜಿಲ್ಲಾಧಿಕಾರಿಗೆ ಮನವಿ ಸಲ್ಲಿಕೆ



ಗದಗ: ಲೋಕಸಭಾ ಚುನಾವಣೆ ಪ್ರಯುಕ್ತ ಮತದಾರರಲ್ಲಿ ಜಾಗೃತಿ, ಅರಿವು ಮೂಡಿಸುವ, ಮತ ಚಲಾವಣೆಯು ಕುರಿತು ಜಾಹೀರಾತುಗಳನ್ನು ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳಿಗೆ ಬಿಡುಗಡೆ ಮಾಡಲು ಒತ್ತಾಯಿಸಿ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ಗದಗ ಜಿಲ್ಲಾ ಘಟಕದಿಂದ ಜಿಲ್ಲಾಧಿಕಾರಿಗಳಿಗೆ ಮಂಗಳವಾರ ಮನವಿ ಸಲ್ಲಿಸಿ ಒತ್ತಾಯಿಸಲಾಯಿತು.

ಇದೇ ತಿಂಗಳ 16ರಂದು ಲೋಕಸಭಾ ಚುನಾವಣೆಯು ವೇಳಾ ಪಟ್ಟಿಯನ್ನು ಕೇಂದ್ರ ಚುನಾವಣಾ ಆಯೋಗದಿಂದ ಮತ್ತು ರಾಜ್ಯ ಚುನಾವಣಾ ಆಯೋಗದಿಂದ ರಾಜ್ಯದಲ್ಲಿ ಅಧಿಕೃತವಾಗಿ ಘೋಷಣೆ ಮಾಡಿ ಹೊರಡಿಸಲಾಗಿದೆ. ಲೋಕಸಭಾ ಚುನಾವಣೆ ಹಿನ್ನೆಲೆ ಯಲ್ಲಿ ರಾಜ್ಯದ ಮತದಾರರಿಗೆ ಮತದಾನದ ಬಗ್ಗೆ ಮತದಾರರಲ್ಲಿ ಅರಿವು ಮೂಡಿಸುವ ಕುರಿತು ಚುನಾವಣಾ ನೀತಿ ಸಂಹಿತೆ ಪಾಲಿಸುವ ಕುರಿತಂತೆ ಚುನಾ ವಣಾ ಆಯೋಗದಿಂದ ರಾಜ್ಯ ಮಟ್ಟದ ಪತ್ರಿಕೆಗಳಿಗೆ ನೀಡುವ ಜಾಹೀರಾತುಗಳನ್ನು ಕೂಡ ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳಿಗೆ ನೀಡುವಂತೆ ಮನವಿ ಸಲ್ಲಿಸುವುದರ ಮೂಲಕ ಒತ್ತಾಯಿಸಿದರು. ಆಯೋಗದಿಂದ ಚುನಾವಣೆ ಕುರಿತಂತೆ ಜಾಹೀ ರಾತುಗಳು ರಾಜ್ಯಮಟ್ಟದ ಪತ್ರಿಕೆಗಳಲ್ಲಿ ಪ್ರಕಟವಾಗುವುದರ ಜೊತೆಗೆ ಜಿಲ್ಲಾ ಮತ್ತು ಪ್ರಾದೇಶಿಕ ಮಟ್ಟದ ಪತ್ರಿಕೆಗಳಲ್ಲಿ ಜಾಹೀರಾತುಗಳು ಪ್ರಕಟವಾದರೆ ಗ್ರಾಮೀಣ ಪ್ರದೇಶದ ಮತದಾರರ ಗಮನವನ್ನು ಹೆಚ್ಚಿನ ರೀತಿಯಲ್ಲಿ ಸೆಳೆಯುತ್ತವೆ. ಆದ್ದರಿಂದ ಲೋಕಸಭಾ ಚುನಾವಣೆ ಕುರಿತಂತೆ ಎಲ್ಲಾ ಜಾಹೀರಾ ತುಗಳನ್ನು ರಾಜ್ಯಮಟ್ಟದ ಪತ್ರಿಕೆಗಳಿಗೆ ನೀಡುವಂತೆಯೇ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಮಾಧ್ಯಮ ಪಟ್ಟಿಯಲ್ಲಿರುವ ಜಿಲ್ಲಾ ಮತ್ತು ಪ್ರಾದೇಶಿಕ ಪತ್ರಿಕೆಗಳಿಗೂ ಎಲ್ಲ ಬಗೆಯ ಜಾಹೀರಾತುಗಳನ್ನು ಬಿಡುಗಡೆ ಮಾಡುವಂತೆ ಒತ್ತಾ ಯಿಸಿದರು. ಈ ಸಂದರ್ಭದಲ್ಲಿ ಕರ್ನಾಟಕ ಕಾರ್ಯನಿರತ ದಿನಪತ್ರಿಕೆಗಳ ಸಂಪಾದಕರ ಸಂಘದ ರಾಜ್ಯ ಉಪಾಧ್ಯಕ್ಷ ಮಂಜುನಾಥ ಅಬ್ಬಿಗೇರಿ, ಜಿಲ್ಲಾಧ್ಯಕ್ಷ ನೂರ್ ಅಹ್ಮದ್ ಅ. ಮಕಾನದಾರ, ಕಾರ್ಯದರ್ಶಿ ದೇವಪ್ಪ ಲಿಂಗದಾಳ, ಅಜೀತ್ ಹೊಂಬಾಳಿ, ರಾಜು ಹೆಬ್ಬಳ್ಳಿ, ಜಗದೀಶ್ ಪೂಜಾರ್ ಸೇರಿದಂತೆ ಇತರರು ಇದ್ದರು.

# ಆಟೋ ಮೂಲಕ ಭರ್ಜರಿ ಪ್ರಚಾರ



ಬೆಳಗಾವಿ: ಬೆಳಗಾವಿ ಲೋಕಸಭಾ ಕ್ಷೇತ್ರದಲ್ಲಿ ಪುತ್ರ ಮೃಣಾಲ್ ಹೆಬ್ಬಾಳ್ಕರ್ ಪರ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಅವರು ಆಟೋ ಮೂಲಕ ಭರ್ಜರಿ ಪ್ರಚಾರ ಕೈಗೊಂಡರು.

ಸಹ್ಯಾದಿ ನಗರ ದಿಂದ ಆರಂಭಗೊಂಡ ಆಟೋ ಪ್ರಚಾರ ಹನುಮಾನ ನಗರ ,ಕಿರ್ಲೋಸ್ಕರ ರೋಡ್ , ಖಡೇ ಬಜಾರ ಸೇರಿ ವಿವಿಧೆಡ ಕಡೆ ಆಟೋ ಮೂಲಕ ಭರ್ಜರಿ ಪ್ರಚಾರ ಕೈಗೊಂಡಿದರು . ಈ ವೇಳೆ ಮಾಧ್ಯಮಗಳೊಂದಿಗೆ ಮಾತನಾಡಿದ ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಜಗಧೀಶ್ ಶೆಟ್ಟರ್ ಕೋವಿಡ ಸಮಯದಲ್ಲಿ ಬೆಳಗಾವಿ ಜಿಲ್ಲಾ ಉಸ್ತುವಾರಿ ಸಚಿವರು ಆಗಿದ್ದರು ,ಅವರು ಬೆಳಗಾವಿ ಜಿಲ್ಲೆಗೆ ಏನೇನೂ ಮಾಡಿಲ್ಲ , ಕಳೆದ ಚುನಾವಣೆ ಸ್ವಾರ್ಥ ರಾಜಕಾರಣಗೊಸ್ಕರ್ ಪಕ್ಷ ತೊರೆದು ಮರಳಿ ಮತ್ತೆ ಬಿಜೆಪಿ ಸೇರಿದ್ದಾರೆ ಜನ ಇದನ್ನು ಗಮನಸಿರುತ್ತಾರೆ , ಯಡಿಯೂರಪ್ಪ ಬಗ್ಗೆ ಅಪಾರ ಗೌರವಿದೆ ,ಪಾಪ ಅವರನ್ನು ಎರಡು ಬಾರಿ ಮುಖ್ಯಮಂತ್ರಿ ಆದರೂ ಸಂಪೂರ್ಣವಾಗಿ ಅಧಿಕಾರವಧಿ ಪೂರ್ಣಗೊಳಿಸಲು ಬಿಡಲಿಲ್ಲ ಎಂದರು.

# ಬೂದು ನೀರು ನಿರ್ವಹಣಾ ಕಾಮಗಾರಿಯನ್ನು ವೈಜ್ಞಾನಿಕವಾಗಿ ಅನುಷ್ಠಾನಗೊಳಿಸಿ: ಸಿಇಒ



ಕೊಪ್ಪಳ ಮಾರ್ಚ್ 27 : ಹಿಟ್ನಾಳ ಗ್ರಾಮದಲ್ಲಿ ಈಗಾಗಲೇ ಗುರುತಿಸಲಾದ ಸ್ಥಳಗಳಲ್ಲಿ ವೈಜ್ಞಾನಿಕವಾಗಿ ಬೂದು ನೀರು ನಿರ್ವಹಣಾ ಕಾಮಗಾರಿಯನ್ನು ಅನುಷ್ಠಾನಗೊಳಿಸಿ ಎಂದು ಜಿಲ್ಲಾ ಪಂಚಾಯತಿ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೆಯ ಸೂಚಿಸಿದರು.

ಬುಧವಾರದಂದು ಕೊಪ್ಪಳ ತಾಲೂಕಿನ ಹಿಟ್ನಾಳ ಗ್ರಾಮದಲ್ಲಿ ಬೂದು ನೀರು ನಿರ್ವಹಣಾ ಕಾಮಗಾರಿಗಳಿಗೆ ಗುರುತಿಸಲಾದ ಸ್ಥಳಗಳಿಗೆ ಭೇಟಿ ನೀಡಿ ಮಾತನಾಡಿದರು. ಬೂದು ನೀರು ನಿರ್ವಹಣಾ ಕಾಮಗಾರಿಯನ್ನು ಅನುಷ್ಠಾನಸಲು ಪ್ರತಿ ತಾಲೂಕಿಗೆ 02 ಗ್ರಾಮ ಪಂಚಾಯತಿಗಳನ್ನು ಆಯ್ಕೆ ಮಾಡಿಕೊಂಡು ಅನುಷ್ಠಾನಸುವಂತೆ ಗ್ರಾಮೀಣಾಭಿವೃದ್ಧಿ ಆಯುಕ್ತಾಲಯ ನಿರ್ದೇಶನ ನೀಡಿರುವ ಪ್ರಯುಕ್ತ ತಾಲೂಕಿನ ಹಿಟ್ನಾಳ, ಹಾಲವರ್ತಿ ಗ್ರಾಮ ಪಂಚಾಯತಿಗಳನ್ನು ಆಯ್ಕೆ ಮಾಡಿಕೊಂಡಿದ್ದು, ವೈಜ್ಞಾನಿಕವಾಗಿ ಬೂದು ನೀರನ್ನು ಸಂಸ್ಕರಿಸಿ ಕಾಲುವೆ, ಕೆರೆ, ನಾಲಾಗಳಿಗೆ ಹರಿಸುವಂತೆ ಕ್ರಮವಹಿಸಲು ಸೂಚಿಸಿದರು.ಬೂದು ನೀರು ಹೊರಗಡೆ ಹೋಗಲು ಗುರುತಿಸಲಾದ ಗುರುತುಗಳನ್ನು ವೀಕ್ಷಿಸಿದ ಅವರು, ಗ್ರಾಮದಲ್ಲಿ ಬೂದು ನೀರು ಬರುವಂತಹ ಸ್ಥಳದಲ್ಲಿ ಚರಂಡಿ ಕಾಮಗಾರಿಗಳನ್ನು ಅನುಷ್ಠಾನಸತಕ್ಕದ್ದು. ಬೂದು ನೀರು ನಿರ್ವಹಣೆ ಕಾಮಗಾರಿಯನ್ನು ವಿವಿಧ ಯೋಜನೆಗಳಾದ 15ನೇ ಹಣಕಾಸು, ಸ್ವಚ್ಛ ಭಾರತ ಮಿಳನ್, ನರೇಗಾ ಯೋಜನೆಗಳ ಅನುದಾನವನ್ನು ಒಗ್ಗೂಡಿಸಿಕೊಂಡು ಅನುಷ್ಠಾನಗೊಳಿಸಬೇಕು. ಗ್ರಾಮದಲ್ಲಿ ಅವಶ್ಯವಿದ್ದಲ್ಲಿ ವೈಯಕ್ತಿಕ ಮತ್ತು ಸಮುದಾಯ ಇಂಗು ಗುಂಡಿ ನಿರ್ಮಿಸಲು ಸ್ಥಳದ ಲಭ್ಯತೆ ನೋಡಿಕೊಂಡು ಅನುಷ್ಠಾನಗೊಳಿಸಿ. ಕಾಮಗಾರಿ ಉತ್ತಮ ಗುಣಮಟ್ಟದಿಂದ ಕೂಡಿರಬೇಕು. ಕಾಮಗಾರಿಯಿಂದ ಅಲ್ಲಿನ ಸಾರ್ವಜನಿಕರಿಗೆ ತೊಂದರೆಯಾಗದಂತೆ ಕ್ರಮವಹಿಸಿ ಎಂದು ಹಾಜರಿದ್ದ ಪಂಚಾಯತ ಅಭಿವೃದ್ಧಿ ಅಧಿಕಾರಿ ಹಾಗೂ ತಾಂತ್ರಿಕ ಸಹಾಯಕರಿಗೆ ಸೂಚಿಸಿದರು.

ನಂತರ ಗ್ರಾಮ ಪಂಚಾಯತಿಗೆ ಭೇಟಿ ನೀಡಿ ಕರವಸೂಲಿಯ ಕುರಿತು ಪ್ರಗತಿ ಪರಿಶೀಲಿಸಿದರು. ಪ್ರತಿ ಮನೆಗೆ ವಿಧಿಸಲಾಗುತ್ತಿರುವ ಕರ ನಿರ್ಧಾರಣೆಯನ್ನು ಸಾಮಾನ್ಯ ಕಟ್ಟಡಗಳು, ವಾಣಿಜ್ಯ ಕಟ್ಟಡಗಳು ಹಾಗೂ ಖಾಲಿ ಜಾಗೆಗಳಿಗೆ ವಿಧಿಸಿದ ಕರ ವಸೂಲಾತಿಯನ್ನು ಖುದ್ದು ಪರಿಶೀಲಿಸಿದರು. ಗ್ರಾಮ ಪಂಚಾಯತಿಗೆ ಸಾರ್ವಜನಿಕರು ಪಿಒಎಸ್ ಮಷಿನ್ ಮೂಲಕ ಕರ ಪಾವತಿಸುತ್ತಿರುವುದರಿಂದ ನೇರವಾಗಿ ಬಾಪೂಜೀ ಸೇವಾ ಕೇಂದ್ರದ ಖಾತೆಗೆ ಜಮೆಯಾಗುತ್ತದೆ ಎಂದು ಪಂಚಾಯತ ಅಭಿವೃದ್ಧಿ ಅಧಿಕಾರಿ ಮಾಹಿತಿ ನೀಡಿದರು. ಗ್ರಾಮ ಪಂಚಾಯತಿ ವ್ಯಾಪ್ತಿಯಲ್ಲಿ ಆಸ್ತಿಗಳ ಮಾಹಿತಿ, ಆಸ್ತಿಗಳಿಗೆ ಇಲ್ಲಿಯವರೆಗೆ ವಿತರಿಸಲಾದ ಫಾರಂ ನಂ.9 ಮತ್ತು 11 ಕುರಿತು ರಿಜಿಸ್ಟರ್ ಪರಿಶೀಲಿಸಿದರು. ನಂತರ ಮುನಿರಾಬಾದ ಡ್ಯಾಂ ಮೂನ್ ಲೈಟ್ ಡಾಬಾದ ಹತ್ತಿರ ಇರುವ ಚೆಕ್‌ಪೋಸ್ಟ್ ಗೆ ಭೇಟಿ ನೀಡಿ ತಪಾಸಣಾ ತಂಡದ ಕಾರ್ಯ ವೈಖರಿಯನ್ನು ಪರಿಶೀಲಿಸಿದರು.

ಈ ಸಂದರ್ಭದಲ್ಲಿ ತಾಲೂಕ ಪಂಚಾಯತ ಕಾರ್ಯನಿರ್ವಾಹಕ ಅಧಿಕಾರಿ ದುಂಡಪ್ಪ ತುರಾದಿ, ನರೇಗಾ ಸಹಾಯಕ ನಿರ್ದೇಶಕ ಯಂಕಪ್ಪ, ಅಕ್ಷರ ದಾಸೋಹ ಸಹಾಯಕ ನಿರ್ದೇಶಕ ಹನಮಂತಪ್ಪ, ಪಂಚಾಯತ ಅಭಿವೃದ್ಧಿ ಅಧಿಕಾರಿ ಸೋಮಶೇಖರ, ತಾಲೂಕ ಐಇಸಿ ಸಂಯೋಜಕ ದೇವರಾಜ ಪತ್ತಾರ, ತಾಂತ್ರಿಕ ಸಂಯೋಜಕ ಯಮನೂರಪ್ಪ, ಕಾರ್ಯದರ್ಶಿ ಕೃಷ್ಣಮೂರ್ತಿ ಹಲಗೇರಿ, ತಾಂತ್ರಿಕ ಸಹಾಯಕ ರಮೇಶ ಕುಮಾರ, ಗ್ರಾಮ ಪಂಚಾಯತಿ ಸಿಬ್ಬಂದಿಗಳಾದ ಮಾರುತಿ, ದೊಡ್ಡಬಸವ ಹಾಜರಿದ್ದರು.

# ಚುನಾವಣಾ ಕಾರ್ಯಗಳಲ್ಲಿ ಮಕ್ಕಳ ಬಳಕೆ ನಿಷೇಧ: ಡಿಸಿ ನಲಿನ್ ಅತುಲ್

ಕೊಪ್ಪಳ ಮಾರ್ಚ್ 27 : ಯಾವುದೇ ಚುನಾವಣಾ ಕಾರ್ಯ ಗಳಲ್ಲಿ, ರಾಜಕೀಯ ಪಕ್ಷಗಳು ತಮ್ಮ ಚುನಾವಣಾ ಪ್ರಚಾರ ಕಾರ್ಯಗಳಲ್ಲಿ ಮಕ್ಕಳನ್ನು ಬಳಸಿಕೊಳ್ಳುವುದನ್ನು ನಿಷೇಧಿಸಿದೆ ಎಂದು ಜಿಲ್ಲಾಧಿಕಾರಿ ಹಾಗೂ ಜಿಲ್ಲಾ ಚುನಾವಣಾಧಿಕಾರಿಗಳಾದ ನಲಿನ್ ಅತುಲ್ ಅವರು ತಿಳಿಸಿದ್ದಾರೆ.

ಮಕ್ಕಳ ಹಕ್ಕುಗಳ ಒಡಂಬಡಿಕೆ ಹಾಗೂ ಮಕ್ಕಳ ನ್ಯಾಯ (ಮಕ್ಕಳ ಪೋಳಣೆ ಮತ್ತು ರಕ್ಷಣೆ ಕಾಯ್ದೆ)–2015 ಹಾಗೂ ತಿದ್ದುಪಡಿ ಕಾಯ್ದೆ–2021 ರನ್ವಯ 18 ವರ್ಷದೊಳಗಿನ ಎಲ್ಲಾ ಮಾನವ ಜೀವಿಗಳು ಮಕ್ಕಳು ಎಂದು ಪರಿಗಣಿಸಲಾಗಿದೆ. ಮಕ್ಕಳ ಹಕ್ಕುಗಳ ಒಡಂಬಡಿಕೆಯ ಕಲಂ 32 ಮತ್ತು 36ರಲ್ಲಿ ಮಕ್ಕಳ ಆರೋಗ್ಯ ಮತ್ತು ಶಿಕ್ಷಣಕ್ಕೆ ಅಪಾಯಕಾರಿಯಾದ ಕ್ಷೇತ್ರಗಳಲ್ಲಿ ಮಕ್ಕಳು ಕಾರ್ಯನಿರ್ವಹಿಸದಂತೆ ಹಾಗೂ ಮಕ್ಕಳ ಬೆಳವಣಿಗೆಗೆ ತೊಡಕನ್ನುಂಟು ಮಾಡುವ ಯಾವುದೇ ಚಟುವಟಿಕೆಯಲ್ಲಿ ಮಕ್ಕಳು ಭಾಗವಹಿಸದಂತೆ ಸೂಕ್ತ ಕ್ರಮಗಳನ್ನು ಕೈಗೊಳ್ಳಲು ನಿರ್ದೇಶಿ ಸಿರುತ್ತದೆ.

ಅದರಂತೆ ಭಾರತ ಚುನಾವಣಾ ಆಯೋಗವು ಚುನಾ ವಣಾ ಕಾರ್ಯಗಳಲ್ಲಿ ಅಥವಾ ರಾಜ ಕೀಯ ಪಕ್ಷಗಳು ಚುನಾ ವಣಾ ಪ್ರಚಾರ ಕಾರ್ಯಗಳಲ್ಲಿ ಮಕ್ಕಳನ್ನು ಬಳಸಿಕೊ ಳ್ಳುವುದನ್ನು ನಿಷೇಧಿ ಸಿರುವ ಕುರಿತು ಪ್ರಕಟಣೆಯನ್ನು ಸಹ ಹೊರಡಿಸಿರುತ್ತಾರೆ. ಬಾಲಕಾರ್ಮಿಕ ಮತ್ತು ಕಿಶೋರ ಕಾರ್ಮಿಕ ಪದ್ಧತಿ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ–1986 ಹಾಗೂ ತಿದ್ದುಪಡಿ ಕಾಯ್ದೆ–2016 ಕಾಯ್ದೆಯನ್ವಯ 14 ವರ್ಷದೊಳಗಿನ ಮಕ್ಕಳು ಯಾವುದೇ ದುಡಿಮೆ ಕಾರ್ಯದಲ್ಲಿ ಅಥವಾ ದುಡಿಮೆ ಚಟುವಟಿ ಕೆಗಳಲ್ಲಿ ಮಕ್ಕಳನ್ನು ಬಳಸಿಕೊ ಳ್ಳುವುದನ್ನು ನಿಷೇಧಿಸಿದೆ ಮತ್ತು 18 ವರ್ಷದೊಳಗಿನ ಮಕ್ಕಳು ಅಪಾಯಕಾರಿ ಕ್ಷೇತ್ರಗಳಲ್ಲಿ ಕಾಯ ರ್ನಿರ್ವಹಿಸುವುದನ್ನು ನಿಷೇಧಿಸಿದೆ. ಒಂದು ವೇಳೆ ಕಾಯ್ದೆಯನ್ನು ಉಲ್ಲಂಘಿಸಿ ಮಕ್ಕಳನ್ನು ಕೆಲಸ ಅಥವಾ ಇನ್ನಾವುದೇ ಕಾರ್ಯಗಳಲ್ಲಿ ನೇಮಿಸಿ ಕೊಂಡಲ್ಲಿ ಕಲಂ 14ರಡಿಯಲ್ಲಿ 2 ವರ್ಷದವರೆಗೆ ವಿಸ್ತರಿಸಬಹುದಾದ ಜೈಲು ಶಿಕ್ಷೆ ಮತ್ತು ರೂ. 50,000/– ದಂಡವನ್ನು ವಿಧಿಸಬಹುದಾಗಿದೆ. ಆದ್ದರಿಂದ ಎಲ್ಲಾ ಅಧಿಕಾರಿಗಳು, ಚುನಾವಣಾ ಜಾಗೃತ ದಳಗಳು, ರಾಜಕೀಯ ಪಕ್ಷಗಳ ಮುಖಂಡರು ಹಾಗೂ ಸಾರ್ವಜನಿಕರು ಯಾವುದೇ ಚುನಾವಣಾ ಕಾರ್ಯಗಳಲ್ಲಿ ಹಾಗೂ ಯಾವುದೇ ರಾಜಕೀಯ ಪಕ್ಷಗಳು ತಮ್ಮ ಚುನಾವಣಾ ಪ್ರಚಾರ ಕಾರ್ಯಗಳಲ್ಲಿ ಮಕ್ಕಳನ್ನು ಬಳಸಿಕೊಳ್ಳುವುದನ್ನು ನಿಷೇಧಿಸಲಾಗಿದೆ. ಒಂದು ವೇಳೆ ಯಾರಾದರೂ ಈ ರೀತಿಯ ಕಾರ್ಯ ಗಳಲ್ಲಿ 18 ವರ್ಷದೊಳಗಿನ ಮಕ್ಕಳನ್ನು ಬಳಸಿಕೊಂಡಲ್ಲಿ, ಮೇಲ್ಕಾಣಿಸಿದ ಕಾಯ್ದೆಗಳನ್ವಯ ಕಾನೂನು ರೀತ್ಯಾ ಸೂಕ್ತ ಶಿಸ್ತಿನ ಕ್ರಮ ಜರುಗಿಸಲಾಗುವುದು ಎಂದು ಜಿಲ್ಲಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಜಿಲ್ಲೆಯ ಅಂಚೆ ಕಚೇರಿಗಳಲ್ಲಿ ಮಾ.30 ರಂದು ಬಟವಾಡೆ ಹೊರತುಪಡಿಸಿ ಇತರೆ ಸೇವೆ ಲಭ್ಯವಿಲ್ಲ

ಕೊಪ್ಪಳ ಮಾರ್ಚ್ 27: ಕೊಪ್ಪಳದಲ್ಲಿ ನೂತನ ಅಂಚೆ ವಿಭಾಗೀಯ ಕಾರ್ಯಾಲಯವು ಏಪ್ರಿಲ್ 1 ರಿಂದ ಚಾಲನೆಗೊಳ್ಳುತ್ತಿದ್ದು, ಪ್ರಸ್ತುತ ಗದಗ ಅಂಚೆ ವಿಭಾಗದ ಅಡಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಕೊಪ್ಪಳ ಜಿಲ್ಲೆಯ ಕೊಪ್ಪಳ, ಕುಷ್ಟಗಿ, ಗಂಗಾವತಿ, ಕನಕಗಿರಿ, ಕಾರಟಗಿ, ಕುಕನೂರು, ಯಲಬುರ್ಗಾ ತಾಲ್ಲೂಕಿನ ವ್ಯಾಪ್ತಿಯಲ್ಲಿ ಬರುವ ಎಲ್ಲಾ ಅಂಚೆ ಕಛೇರಿಗಳಲ್ಲಿ ತಾಂತ್ರಿಕ ಪೂರ್ವಸಿದ್ಧತೆಗಳಿಗಾಗಿ ಮಾ.30 ರಂದು ಬಟವಾಡೆಯನ್ನು ಹೊರತುಪಡಿಸಿ ಯಾವುದೇ ರೀತಿಯ ಅಂಚೆ ಸೇವೆಗಳು ಲಭ್ಯವಿರುವುದಿಲ್ಲ.

ಆದ್ದರಿಂದ ಸಾರ್ವಜನಿಕರು ಸಹಕರಿಸಬೇಕೆಂದು ಗದಗ ವಿಭಾಗದ ಅಂಚೆ ಅಧೀಕ್ಷಕರಾದ ಎನ್.ಜಿ.ಭಂಗಿಗೌಡರರವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೆಸ್ಕಾಂ ಮುನಿರಾಬಾದ್ : ಮಾ.31 ರಂದು ವಿದ್ಯುತ್

ಕೊಪ್ಪಳ ಮಾರ್ಚ್ 27 : ಜೆಸ್ಕಾಂ ಮುನಿರಾಬಾದ್ ಉಪ ವಿಭಾಗದ ಶಾಖೆ–1ರ (ಮುನಿರಾಬಾದ್ ಶಾಖೆ) ವ್ಯಾಪ್ತಿಯಲ್ಲಿ ಫೀಡರ್‌ಗಳ ನಿರ್ವಹಣಾ ಕಾರ್ಯ ನಡೆಯುತ್ತಿರುವ ಪ್ರಯುಕ್ತ ಫೀಡರ್‌ಗಳಿಗೆ ಸಂಬಂಧಿಸಿದ ಗ್ರಾಮಗಳ ವ್ಯಾಪ್ತಿಯಲ್ಲಿ ಮಾರ್ಚ್ 31 ರಂದು ಬೆಳಿಗ್ಗೆ 09 ಗಂಟೆಯಿಂದ ಮಧ್ಯಾಹ್ನ 01 ಗಂಟೆಯವರೆಗೆ ಗ್ರಾಹಕರಿಗೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯ ಉಂಟಾಗಲಿದೆ.

ಎಫ್1 ಫ್ಯಾಕ್ಟರಿ ಫೀಡರ್‌ಗೆ ಒಳಪಡುವ ಲಿಂಗಾಪುರ, ಹೊಸಳ್ಳಿ, ಬೇವಿನಹಳ್ಳಿ, ಟಾಟಾ ಶೋ ರೂಮ್ ಪ್ರದೇಶ, ಹುಲಿಗಿ, ಕಿರ್ಲೋಸ್ಕರ್ ಕಾರ್ಖಾನೆ ಪ್ರದೇಶ (ಕಿರ್ಲೋಸ್ಕರ್ ಫೆರಸ್ ಇಂಡಸ್ಟ್ರೀಸ್ ಲಿಮಿಟೆಡ್ ಪ್ರದೇಶ), ಎಫ್2 ಕಾಲೋನ ಫೀಡರ್‌ಗೆ ಒಳಪಡುವ ಮುನಿರಾಬಾದ್ ಮತ್ತು ಎಸ್.ಆರ್.ಎಸ್ ಲಿಂಗಾಪುರ, ಹಾರ್ಟಿಕಲ್ಚರ್ ಕಾಲೇಜ್ ಪ್ರದೇಶ, ಚಿಕ್ಕ ಕಾಸನಕಂಡಿ ಪ್ರದೇಶ, ಎಫ್4 ಮುನಿರಾಬಾದ್ ಐ.ಪಿ ಫೀಡರ್‌ಗೆ ಒಳಪಡುವ ಲಿಂಗಾಪುರ, ಹೊಸಳ್ಳಿ ಮತ್ತು ಕಾಸನಕಂಡಿ ಗ್ರಾಮಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ.

ಅಂದು ನಿಗದಿತ ಅವಧಿಗೆ ಮುಂಚಿತವಾಗಿ ನಿರ್ವಹಣಾ ಕೆಲಸ ಪೂರ್ಣಗೊಂಡಲ್ಲಿ ಯಾವುದೇ ಸಮಯದಲ್ಲಿ ವಿದ್ಯುತ್ ಸರಬರಾಜು ಮಾಡಲಾಗುವುದು. ಆದ್ದರಿಂದ ಸಾರ್ವಜನಿಕರು / ಗ್ರಾಹಕರು ಯಾವುದೇ ಕಾರಣಕ್ಕೂ ಮಾರ್ಗಮುಕ್ತತೆ ತೆಗೆದುಕೊಂಡ ಅವಧಿಯಲ್ಲಿ ವಿದ್ಯುತ್‌ಗೆ ಸಂಬಂಧಿಸಿದ ಯಾವುದೇ ಕಾಮಗಾರಿಯನ್ನು ನಡೆಸಬಾರದು. ಒಂದು ವೇಳೆ ಯಾವುದೇ ವಿದ್ಯುತ್ ಅವಘಡ ಸಂಭವಿಸಿದಲ್ಲಿ ಗ್ರಾಹಕರೇ ನೇರ ಹೊಣೆಗಾರರಾಗುತ್ತಾರೆ. ಇಂತಹ ವಿದ್ಯುತ್ ಅವಘಡಕ್ಕೆ ಜೆಸ್ಕಾಂ ಯಾವುದೇ ರೀತಿಯಲ್ಲಿ ಜವಾಬ್ದಾರಿಯಾಗಿರುವುದಿಲ್ಲ ಎಂದು ಜೆಸ್ಕಾಂ ಮುನಿರಾಬಾದ್‌ನ ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಪ. ಜಾ/ ಪ. ವರ್ಗದ ಜಿಲ್ಲಾ ಜಾಗೃತ ದೌರ್ಜನ್ಯ ನಿಯಂತ್ರಣ ಸಮಿತಿ ಹಾಗೂ ಎಸ್‌ಸಿಪಿ/ ಟಿಎಸ್ಪಿ ಪ್ರಗತಿ ಪರಿಶೀಲನೆ ಸಭೆ

ಗದಗ ಮಾರ್ಚ 27: ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಬುಧವಾರ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರ ಅಧ್ಯಕ್ಷತೆಯಲ್ಲಿ ಎಸ್ ಸಿಪಿ/ ಟಿಎಸ್‌ಪಿ ಪ್ರಗತಿ ಪರಿಶೀಲನೆ ಹಾಗೂ ಪ.ಜಾ/ ಪ.ವರ್ಗದ ಜಿಲ್ಲಾ ಜಾಗೃತ ದೌರ್ಜನ್ಯ ನಿಯಂತ್ರಣ ಸಮಿತಿ ಸಭೆ ಜರುಗಿದವು.

ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಜಿಲ್ಲಾ ಪೊಲೀಸ ವರಿಷ್ಟಾಧಿಕಾರಿ ಬಿ.ಎಸ್. ನೇಮಗೌಡ, ಅಪರ ಜಿಲ್ಲಾಧಿಕಾರಿ ಸುರೇಖಾ, ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರಾದ ಪ್ರಶಾಂತ ವರಗಪ್ಪನವರ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಅಧಿಕಾರಿ ರವಿ ಗುಂಜೀಕರ್ ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

# ಗ್ರಾಹಕರ ಹಕ್ಕು ಮತ್ತು ಜವಾಬ್ದಾರಿಗಳ ಕುರಿತು ಜನಜಾಗೃತಿ ಅತ್ಯಗತ್ಯ

ಗದಗ ಮಾರ್ಚ 27: ಗ್ರಾಹಕರಿಗೆ ಅವರ ಹಕ್ಕು ಮತ್ತು ಜವಾಬ್ದಾರಿಗಳ ಕುರಿತು ಜನಜಾಗೃತಿ ಮೂಡಿಸುವುದು ವಿಶ್ವ ಗ್ರಾಹಕರ ದಿನಾಚರಣೆಯ ಪ್ರಮುಖ ಉದ್ದೇಶವಾಗಿದೆ ಎಂದು ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಬಸವರಾಜ ಅವರು ತಿಳಿಸಿದರು.

ಜಿಲ್ಲಾಡಳಿತ ಭವನದ ಆಡಿಟೋರಿಯಂ ಹಾಲ್ ದಲ್ಲಿ ಬುಧವಾರ ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಆಹಾರ ನಾಗರಿಕ, ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗ, ಕಾನೂನು ಮಾಪನ ಶಾಸ್ತ್ರ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಆಹಾರ ಸುರಕ್ಷತೆ ಮತ್ತು ಗುಣಮಟ್ಟ ಇಲಾಖೆ, ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಇವರ ಸಂಯುಕ್ತ ಆಶ್ರಯದಲ್ಲಿ " ಗ್ರಾಹಕರಿಗಾಗಿ ನ್ಯಾಯಯುತ ಮತ್ತು ಜವಾಬ್ದಾರಿಯುತ ಕೃತಕ ಬುದ್ಧಿಮತ್ತೆ" ಎಂಬ ಘೋಷವಾಕ್ಯದಡಿ ಹಮ್ಮಿಕೊಳ್ಳಲಾಗಿದ್ದ ವಿಶ್ವ ಗ್ರಾಹಕರ ದಿನಾಚರಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.ಸಮಾಜದ ಕಟ್ಟಕಡೆಯ ವ್ಯಕ್ತಿಯಿಂದ ಹಿಡಿದು ರಾಷ್ಟ್ರಪತಿಯವರೆಗೆ ಪ್ರತಿಯೊಬ್ಬ ವ್ಯಕ್ತಿಯೂ ಒಂದಿಲ್ಲೊಂದು ರೀತಿಯಲ್ಲಿ ಗ್ರಾಹಕರಾಗಿರುತ್ತಾರೆ. ಇಂದಿನ ದಿನಮಾನಗಳಲ್ಲಿ ಆರ್ಟಿಫಿಶಿಯಲ್ ಇಂಟಲಿಜೆನ್ಸ್ ( ಕೃತಕ ಬುದ್ಧಿಮತ್ತೆ) ಬಳಕೆಯಿಂದ ಸಾಮಾಜಿಕ ಜಾಲತಾಣಗಳಲ್ಲಿ ತಮಗೆ ಬೇಕಾಗುವಂತಹ ವಸ್ತುಗಳನ್ನು ಖರೀದಿ ಮಾಡಬೇಕಾಗುತ್ತದೆ. ಮೊಬೈಲ್ ಫೋನ್ ಕೂಡ ಕೃತಕ ಬುದ್ಧಿಮತ್ತೆಯ ಒಂದು ಭಾಗವಾಗಿದೆ. ಕೃತಕ ಬುದ್ಧಿಮತ್ತೆ ಸಹಾಯದಿಂದ ವೈದ್ಯಕೀಯ ಲೋಕದಲ್ಲಿಯ ಸವಾಲುಗಳಿಗೆ ಪರಿಹಾರ , ಹವಾಗುಣ ಪರಿಸ್ಥಿತಿ, ರೂಟ್ ಮ್ಯಾಪ್ ಹೀಗೆ ಅನೇಕ ತರಹದ ಪ್ರಶ್ನೆಗಳಿಗೆ ಉತ್ತರ ಕಂಡುಕೊಳ್ಳಬಹುದಾಗಿದೆ. ಗ್ರಾಹಕರು ಸಾಮಾಜಿಕ ಜಾಲತಾಣದಲ್ಲಿ ಆನ್‌ಲೈನ್ ಮುಖಾಂತರ ಯಾವುದಾದರೂ ವಸ್ತುಗಳನ್ನು ಖರೀದಿ ಮಾಡಿದ್ದರೆ ಅಂತಹ ಸರಕುಗಳಲ್ಲಿ ಲೋಪದೋಷಗಳು ಕಂಡು ಬಂದರೆ ಅಥವಾ ಸರಬರಾಜುದಾರರು ತಪ್ಪು ಮಾಹಿತಿ ಕೊಟ್ಟಿದ್ದರೆ ಆಗ ಅವರು ಶಿಕ್ಷೆಗೆ ಒಳಗಾಗುತ್ತಾರೆ. ಆದಕಾರಣ ಗ್ರಾಹಕರು ಇಂದಿನ ತಂತ್ರಜ್ಞಾನದ ತಿಳುವಳಿಕೆ ಹೊಂದುವುದು ಹಾಗೂ ಬಳಕೆ ಮಾಡುವುದು ಸಹ ಅಗತ್ಯವಾಗಿದೆ. ಯಾವುದೇ ಲಿಂಗಬೇಧವಿಲ್ಲದೇ ಸಮಾನವಾಗಿ ಹಾಗೂ ಜವಾಬ್ದಾರಿಯುತವಾಗಿ ಗ್ರಾಹಕರಿಗೆ ನ್ಯಾಯ ಒದಗಿಸುವುದು ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಕಾರ್ಯವಾಗಿದೆ. ಸಾಮಾಜಿಕ ಜವಾಬ್ದಾರಿ ಅರಿತು ಉತ್ಪಾದನೆ ಮತ್ತು ಮಾರಾಟ ಮಾಡುವುದು ಇಂದಿನ ಅಗತ್ಯವಾಗಿದೆ ಎಂದರು. ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್. ಅವರು ವಿಶ್ವ ಗ್ರಾಹಕರ ದಿನಾಚರಣೆ ನಿಮಿತ್ತ ಏರ್ಪಡಿಸಿದ್ದ ವಸ್ತು ಪ್ರದರ್ಶನ ಉದ್ಘಾಟಿಸಿದರು.



ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿಗಳಾದ ಕೆ.ಗುರುಪ್ರಸಾದ ಅವರು ಮಾತನಾಡಿ 1962 ರ ಮಾರ್ಚ 15 ರಂದು ಅಮೆರಿಕಾದ ಸಂಸತ್ ನಲ್ಲಿ ಅಧ್ಯಕ್ಷರಾದ ಜಾನ್ ಕೆನಡಿಯವರು ಗ್ರಾಹಕರ ಹಕ್ಕುಗಳ ಬಗ್ಗೆ ಪ್ರಸಾಪ ಮಾಡಿದರು. 1986 ರಲ್ಲಿ ಗ್ರಾಹಕರ ರಕ್ಷಣಾ ಕಾಯ್ದೆ ಜಾರಿಗೆ ಬಂದಿತು. 2019 ರಲ್ಲಿ ಗ್ರಾಹಕರ ರಕ್ಷಣಾ ಕಾಯ್ದೆ ಹೊಸದಾಗಿ ಅಧಿನಿಯಮಗೊಳಿಸಲಾಯಿತು. ಮಹಾತ್ಮಾ ಗಾಂಧೀಜಿಯವರು ಗ್ರಾಹಕರೇ ದೇವರೆಂಬ ಮಾತು ಹೇಳಿದ್ದಾರೆ. ಗ್ರಾಹಕರಿಗೆ ವಸ್ತುಗಳನ್ನು ಖರೀದಿಸುವಾಗ ಆಯ್ಕೆ ಮಾಡುವ ಹಕ್ಕು, ಅವುಗಳ ಗುಣಮಟ್ಟಗಳ ಕುರಿತು ತಿಳಿಯುವ ಹಕ್ಕು ಹಾಗೂ ಒಂದು ವೇಳೆ ಮೋಸ ಹೋದರೆ ಪರಿಹಾರ ಪಡೆಯುವ ಹಕ್ಕು ಕೂಡ ಇರುತ್ತದೆ. ಈ ಹಕ್ಕುಗಳ ಕುರಿತು ಗ್ರಾಹಕರು ತಿಳುವಳಿಕೆ ಹೊಂದಬೇಕು ಎಂದು ವಿವರಿಸಿದರು.

ಜಿಲ್ಲಾದಿಕಾರಿಗಳ ಕಾನೂನು ಸಲಹೆಗಾರರಾದ ಎಸ್.ಜಿ. ಪಲ್ಲೇದ ಅವರು ಮಾತನಾಡಿ ಗ್ರಾಹಕರಿಗೆ ವಸ್ತುಗಳನ್ನು ಖರೀದಿಸಿದಾಗ ಮೋಸವಾದಲ್ಲಿ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋ ಗದಿಂದ ಪರಿಹಾರ ಕಂಡುಕೊಳ್ಳಬಹುದಾಗಿದೆ. ಆದರೆ ಗ್ರಾಹಕರು ಮಾರಾಟಗಾರರ ಮೇಲೆ ವೃಥಾ ಸುಳ್ಳು ಆರೋಪಗಳನ್ನು ಮಾಡಬಾರದು. ನ್ಯಾಯಯುತವಾಗಿ ವರ್ತಿ ಸಬೇಕಾಗುತ್ತದೆ ಎಂದು ವಿವರಿಸಿದರು.ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಅಧ್ಯಕ್ಷರಾದ ರಾಚಪ್ಪ ಕೆ. ತಾಳಿಕೋಟಿ ಅವರು ಮಾತನಾಡಿ ಈಗ ನಾವೆಲ್ಲ ಆರ್ಟಿಫಿಶಿಯಲ್ ಇಂಟಲಿಜೆನ್ಸ ನಲ್ಲಿ ವ್ಯವಹರಿಸುತ್ತಿದ್ದೇವೆ. ಇದರಿಂದ ಕೆಲವೊಂದು ಸಾಧಕ ಬಾಧಕಗಳಿವೆ. ಬ್ಯಾಂಕ್, ಇನ್ಸುರನ್ಸ ಕಂಪನಿಯಲ್ಲಿನ ಸೇವೆಗಳ ಕುರಿತು ಗ್ರಾಹಕರಿಗೆ ನ್ಯೂನತೆಗಳು ಕಂಡುಬಂದಲ್ಲಿ ಅಂತರ್ಜಾಲದ ಮೂಲಕ ಸಂದೇಶಗಳನ್ನು ರವಾನಿಸಿ ಅವುಗಳ ಪ್ರಿಂಟ್ ಕಾಪಿಯನ್ನು ಹಾಗೂ ಸೇವೆಗಳ ರಸೀದಿಯನ್ನು ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗಕ್ಕೆ ಹಾಜರುಪಡಿಸಿ ಪರಿಹಾರ ಕಂಡುಕೊಳ್ಳಬಹುದಾಗಿದೆ ಎಂದರು.

ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಮಹಿಳಾ ಸದಸ್ಯರಾದ ಯಶೋಧಾ ಪಾಟೀಲ ಅವರು ಪ್ರಾಸ್ತಾವಿಕವಾಗಿ ಮಾತನಾಡಿ ಗ್ರಾಹಕರು ಕಾಲಕ್ಕೆ ತಕ್ಕಂತೆ ಬದಲಾವಣೆ ಹೊಂದಬೇಕು. ಮಾಹಿತಿ ಮತ್ತು ತಂತ್ರಜ್ಞಾನಗಳನ್ನು ಬಳಸಿ ವ್ಯವಹರಿಸಬೇಕಾದ ಅನಿವಾರ್ಯತೆ ಈಗಿನದಾಗಿದೆ ಎಂದು ಪ್ರಾಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಅಪರ ಜಿಲ್ಲಾಧಿಕಾರಿ ಸುರೇಖಾ, ಜಿಲ್ಲಾ ಗ್ರಾಹಕರ ವ್ಯಾಜ್ಯಗಳ ಪರಿಹಾರ ಆಯೋಗದ ಸದಸ್ಯರಾದ ರಾಜು ನಾಮದೇವ ಮೇತ್ರಿ, ಜಿಲ್ಲಾ ವಕೀಲರ ಸಂಘದ ಅಧ್ಯಕ್ಷರಾದ ಎಂ.ಐ. ಹಿರೇಮನಿ ಪಾಟೀಲ, ಎಲ್.ಪಿ.ಜಿ ವ್ಯವಸ್ಥಾಪಕರು, ಕಾನೂನು ಮಾಪನ ಶಾಸ್ತ್ರ ಇಲಾಖೆಯ ಸಹಾಯಕ ನಿಯಂತ್ರಕರಾದ ಎಸ್.ಬಿ. ಪೂಜಾರಿ, ವಿವಿಧ ಇಲಾಖೆ ಅಧಿಕಾರಿಗಳು, ನ್ಯಾಯಬೆಲೆ ಅಂಗಡಿಕಾರರು, ಪದವಿ ಪೂರ್ವ ಮತ್ತು ಪದವಿ ವ್ಯಾಸಂಗ ವಿದ್ಯಾರ್ಥಿಗಳು ಹಾಜರಿದ್ದರು.

ಆಹಾರ ಮತ್ತು ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಇಲಾಖೆಯ ಉಪನಿರ್ದೇಶಕ ಡಾ.ಹಂಪಣ್ಣ ಸಜ್ಜನ ಸ್ವಾಗತಿಸಿದರು. ಆಹಾರ ಸುರಕ್ಷತಾ ಅಧಿಕಾರಿ ಡಾ. ರಾಜೇಂದ್ರ ಗಡಾದ ಅವರು ಕಾರ್ಯಕ್ರಮ ನಿರೂಪಿಸಿ ವಂದಿಸಿದರು.

GADI KANNADIGA,kannada daily, printed, published , edited, & woned by murugesh b.shivapuji ,printed ,plot no:12,sy no:174/3b,press colony,kuvempu nagar, post:hindalaga-591108,Tq & Dt:belgaum, And published at plot no:12,sy no:174/3b,press colony,kuvempu nagar,post:hindalaga-591108,Tq & Dt:belgaum, karnataka, RNI NO:KAR KAN/2003/10452. Permission to post at Belagavi, Kacheri post office Belagavi. No:PMG/KA/NK/BM/743/24-26